# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ವಿಠ್ಠಲ ರುಕ್ಮಿಣಿ ಸಂತ ತುಕಾರಾಮ ಸಂತ ಜ್ಞಾನೇಶ್ವರ ದೇವಸ್ಥಾನ ಜೀರ್ಣೋದ್ಧಾರ ಕಮಿಟಿ ಬೆನಚಿನಮರಡಿ, ಗೋಕಾಕ್ ತಾಲ್ಲೂಕು, ಬೆಳಗಾವಿ ಜಿಲ್ಲೆ ವತಿಯಿಂದ ನಿರ್ಮಿಸುತ್ತಿರುವ ಸಮುದಾಯ ಭವನ ಕಟ್ಟಡ ನಿರ್ಮಾಣಕ್ಕೆ ಅನುದಾನ ಮಂಜೂರು ಮಾಡುವ ಬಗ್ಗೆ.

**ಓದಲಾಗಿದೆ:-**

1. ಸರ್ಕಾರದ ಆದೇಶ ಸಂಖ್ಯೆ: ಹಿಂವಕ 695 ಬಿಎಂಎಸ್ 2014 (ಭಾ-2) ದಿನಾಂಕ:05.11.2014.
2. ಸರ್ಕಾರದ ಆದೇಶ ಸಂಖ್ಯೆ: ಹಿಂವಕ 1133 ಬಿಎಂಎಸ್ 2017, ದಿನಾಂಕ:29.11.2017.
3. ಆಯುಕ್ತರ ಪ್ರಸ್ತಾವನೆ ಸಂಖ್ಯೆ: ಹಿಂವಕಇ/ಸ-7/ಸಿಆರ್-28/2020-21, ದಿನಾಂಕ:14.07.2020.
4. ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 694 ವೆಚ್ಚ-3/2022, ದಿನಾಂಕ:16.11.2022.

*****

**ಪ್ರಸ್ತಾವನೆ:-**

ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ ವಿವಿಧ ಸಮುದಾಯಗಳ ಅಭಿವೃದ್ಧಿ ಕಾರ್ಯಕ್ರಮದಡಿ ರಾಜ್ಯ ವಲಯ ಯೋಜನೆ ಲೆಕ್ಕಶೀರ್ಷಿಕೆ: 2225-03-001-0-05 ರಡಿ ಸಮುದಾಯ ಭವನ/ವಿದ್ಯಾರ್ಥಿನಿಲಯ ಕಟ್ಟಡ ನಿರ್ಮಾಣಕ್ಕಾಗಿ ಪಟ್ಟಣ ಪಂಚಾಯಿತಿ/ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ರೂ.10.00 ಲಕ್ಷ, ತಾಲ್ಲೂಕು ಕೇಂದ್ರಸ್ಥಾನ ರೂ.25.00 ಲಕ್ಷ ಹಾಗೂ ಜಿಲ್ಲಾ ಕೇಂದ್ರಸ್ಥಾನ ರೂ.50.00 ಲಕ್ಷಗಳಂತೆ ಗರಿಷ್ಠ ಮಿತಿಯೊಳಗೊಳಪಟ್ಟು ಪ್ರವರ್ಗ-1, 2ಎ, 3ಎ ಮತ್ತು ಪ್ರವರ್ಗ-3ಬಿಗೆ ಸೇರಿದ ಜಾತಿಗಳ ನೋಂದಾಯಿತ ಸಂಘ/ಸ್ವಯಂ ಸೇವಾ ಸಂಸ್ಥೆ/ಟ್ರಸ್ಟ್‌ಗಳಿಗೆ ಸಹಾಯಧನವನ್ನು ಮಂಜೂರು ಮಾಡಲಾಗುತ್ತಿದೆ.

ಮೇಲೆ ಓದಲಾದ (2)ರ ಸರ್ಕಾರದ ಆದೇಶದಲ್ಲಿ ದಿನಾಂಕ:05.11.2014ರ ಆದೇಶದಲ್ಲಿ ತಿಳಿಸಿರುವ ಅನುದಾನದ ಮಿತಿಯನ್ನು ಅಗತ್ಯ ಸಂದರ್ಭಗಳಲ್ಲಿ ಸಡಿಲಗೊಳಿಸಿ ವಿಶೇಷ ಪ್ರಕರಣವೆಂದು ಪರಿಗಣಿಸಿ ಹೆಚ್ಚುವರಿಯಾಗಿ ಮಂಜೂರು ಮಾಡಲು ಅವಕಾಶ ಕಲ್ಪಿಸಲಾಗಿದೆ.

ಮೇಲೆ ಓದಲಾದ (3)ರ ಆಯುಕ್ತರ ಪ್ರಸ್ತಾವನೆಯಲ್ಲಿ ಶ್ರೀ ವಿಠ್ಠಲ ರುಕ್ಮಿಣಿ ಸಂತ ತುಕಾರಾಮ ಸಂತ ಜ್ಞಾನೇಶ್ವರ ದೇವಸ್ಥಾನ ಜೀರ್ಣೋದ್ಧಾರ ಕಮಿಟಿ ಬೆನಚಿನಮರಡಿ ಗೋಕಾಕ್ ತಾಲ್ಲೂಕು, ಬೆಳಗಾವಿ ಜಿಲ್ಲೆ, ಇವರಿಗೆ ಸಮುದಾಯ ಭವನ ಕಟ್ಟಡ ನಿರ್ಮಾಣಕ್ಕೆ ಅನುದಾನ ಮಂಜೂರಾತಿ ಕೋರಿ ಸಮುದಾಯ ಭವನ ಕಟ್ಟಡದ ರೂ.31.00ಲಕ್ಷಗಳ ಅಂದಾಜು ಪಟ್ಟಿ ಹಾಗೂ ಸಂಬಂಧಿಸಿದ ದಾಖಲೆಗಳೊಂದಿಗೆ ಅನುದಾನ ಮಂಜೂರು ಮಾಡುವಂತೆ ಕೋರಿ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (4)ರ ಆರ್ಥಿಕ ಇಲಾಖೆಯ ಟಿಪ್ಪಣಿಯಲ್ಲಿ ಪ್ರಸ್ತುಕ ಸಾಲಿಗೆ ವಿವಿಧ ಸಮುದಾಯಗಳ ಅಭಿವೃದ್ಧಿ ಕಾರ್ಯಕ್ರಮದಡಿ ಒದಗಿಸಿರುವ ಅನುದಾನದಿಂದ ಮಾನ್ಯ ಮುಖ್ಯಮಂತ್ರಿಯವರು ಆದೇಶಿಸಿರುವಂತೆ ರೂ.15.00 ಲಕ್ಷಗಳನ್ನು ಶ್ರೀ ವಿಠ್ಠಲ ರುಕ್ಮಿಣಿ ಸಂತ

21/11/22

ತುಕಾರಾಮ ಸಂತ ಜ್ಞಾನೇಶ್ವರ ದೇವಸ್ಥಾನ ಜೀರ್ಣೋದ್ಧಾರ ಕಮಿಟಿ ಬೆನಚಿನಮರಡಿ ವತಿಯಿಂದ ನಿರ್ಮಿಸುತ್ತಿರುವ ಶ್ರೀ ಪಾಂಡುರಂಗ ಸಮುದಾಯ ಭವನ ಕಟ್ಟಡ ಕಾಮಗಾರಿಗೆ ಅನುದಾನ ಬಿಡುಗಡೆ ಮಾಡುವಂತೆ ತಿಳಿಸಲಾಗಿದೆ.

ಮೇಲೆ ವಿವರಿಸಿರುವ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 473 ಬಿಎಂಎಸ್ 2020</u>**
**<u>ಬೆಂಗಳೂರು, ದಿನಾಂಕ: 21.11.2022</u>**

ಮೇಲೆ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಶ್ರೀ ವಿಠ್ಠಲ ರುಕ್ಮಿಣಿ ಸಂತ ತುಕಾರಾಮ ಸಂತ ಜ್ಞಾನೇಶ್ವರ ದೇವಸ್ಥಾನ ಜೀರ್ಣೋದ್ಧಾರ ಕಮಿಟಿ, ಬೆನಚಿನಮರಡಿ ಗೋಕಾಕ್ ತಾಲ್ಲೂಕು, ಬೆಳಗಾವಿ ಜಿಲ್ಲೆ ವತಿಯಿಂದ ನಿರ್ಮಿಸುತ್ತಿರುವ ಶ್ರೀ ಪಾಂಡುರಂಗ ಸಮುದಾಯ ಭವನ ಕಟ್ಟಡ ಕಾಮಗಾರಿಗೆ ರೂ.15.00 ಲಕ್ಷ (ಹದಿನೈದು ಲಕ್ಷ ರೂಪಾಯಿಗಳು ಮಾತ್ರ) ಗಳನ್ನು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಮಂಜೂರಾತಿ ನೀಡಿ ಆದೇಶಿಸಿದೆ.

**<u>ಷರತ್ತುಗಳು:</u>**

1. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು ಮೇಲೆ ಓದಲಾದ (1)ರ ಸರ್ಕಾರದ ಆದೇಶ ಸಂಖ್ಯೆ:ಹಿಂವಕ 695 ಬಿಎಂಎಸ್ 2014 (ಭಾ-2) ದಿನಾಂಕ:05.11.2014ರ ಮಾರ್ಗಸೂಚಿಗಳನ್ನು ತಪ್ಪದೇ ಪಾಲಿಸತಕ್ಕದು. ಈ ಯೋಜನೆಯ ಮಾರ್ಗಸೂಚಿಗಳ ಪ್ರಕಾರ ನಿಯಮಾನುಸಾರ ಅಗತ್ಯವಾದ ಎಲ್ಲಾ ದಾಖಲೆಗಳನ್ನು ಪಡೆದು ಪರಿಶೀಲಿಸಿ ಅನುದಾನವನ್ನು ಪಡೆಯಲು ಅರ್ಹತೆ ಇದ್ದಲ್ಲಿ ಮಾತ್ರ ಸದರಿ ಸಂಸ್ಥೆಗೆ ನಿಯಮಾನುಸಾರ ಹಾಗೂ ಅರ್ಹತೆಯನುಸಾರ ಅನುದಾನವನ್ನು ಬಿಡುಗಡೆ ಮಾಡತಕ್ಕದ್ದು.
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು ಇವರು ಕಟ್ಟಡ ಪ್ರಗತಿಗನುಗುಣವಾಗಿ ಹಂತ ಹಂತವಾಗಿ ಬಿಡುಗಡೆ ಮಾಡುವುದು ಹಾಗೂ ಬಿಡುಗಡೆ ಮಾಡಿದ ಮೊತ್ತಕ್ಕೆ ಹಣ ಬಳಕೆ ಪ್ರಮಾಣ ಪತ್ರವನ್ನು ನಿಯಮಾನುಸಾರ ಜಿಲ್ಲಾಧಿಕಾರಿಗಳು ಬೆಳಗಾವಿ ಜಿಲ್ಲೆ ಇವರ ಮುಖಾಂತರ ಪಡೆಯತಕ್ಕದ್ದು.
3. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರು ಸರ್ಕಾರದಿಂದ ನೀಡಲಾಗುತ್ತಿರುವ ಅನುದಾನವು ಪಾರದರ್ಶಕವಾಗಿ ಹಾಗೂ ಮಾರ್ಗಸೂಚಿಗಳನುಸಾರ ಬಳಕೆಯಾಗುತ್ತಿರುವ ಬಗ್ಗೆ ಪರಿಶೀಲಿಸಲು ಪ್ರತಿ ತಿಂಗಳು ಆಯಾ ಜಿಲ್ಲೆಯ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಇವರಿಗೆ ನಿಗಧಿತ ನಮೂನೆಯಲ್ಲಿ ಭಾವಚಿತ್ರಗಳು ಹಾಗೂ ವರದಿಯನ್ನು ಪಡೆಯತಕ್ಕದ್ದು, ವರದಿಯ ಆಧಾರದಲ್ಲಿ ನಿಯಮಾನುಸಾರ ಅವಶ್ಯಕ ಕ್ರಮ ತೆಗೆದುಕೊಳ್ಳತಕ್ಕದ್ದು.
4. ಮಂಜೂರು ಮಾಡಲಾದ ಅನುದಾನವನ್ನು ಯಾವ ಉದ್ದೇಶಕ್ಕೆ ನೀಡಲಾಗಿದೆಯೋ ಅದೇ ಉದ್ದೇಶಕ್ಕೆ ಬಳಸಿಕೊಳ್ಳತಕ್ಕದ್ದು, ಯಾವುದೇ ಕಾರಣಕ್ಕೂ ಅನ್ಯ ಉದ್ದೇಶಕ್ಕೆ ಬಳಸಿಕೊಳ್ಳತಕ್ಕದ್ದಲ್ಲ.
5. ಮಂಜೂರಾದ ಅನುದಾನವನ್ನು 2 ವರ್ಷಗಳೊಳಗಾಗಿ ಕಾಮಗಾರಿಗೆ ವಿನಿಯೋಗಿಸದಿದ್ದಲ್ಲಿ, ಸದರಿ ಅನುದಾನವನ್ನು ದಂಡ ಸಮೇತವಾಗಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲಾಗುವುದು.

ಸದರಿ ವೆಚ್ಚವನ್ನು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿವಿಧ ಸಮುದಾಯಗಳ ಅಭಿವೃದ್ಧಿ ಕಾರ್ಯಕ್ರಮದ ಲೆಕ್ಕಶೀರ್ಷಿಕೆ:2225-03-001-0-05 (103)ರಡಿ ಪ್ರಸಕ್ತ ಸಾಲಿಗೆ ಒದಗಿಸಿರುವ ಅನುದಾನದಿಂದ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 694 ವೆಚ್ಚ-3/2022, ದಿನಾಂಕ:16.11.2022 ರನ್ವಯ ಹಾಗೂ ಸರ್ಕಾರದ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ,
ಮತ್ತು ಅವರ ಹೆಸರಿನಲ್ಲಿ

Shaheenparveen 21/11/2022

**(ಶಾಹೀನ್ ಪರ್ವೀನ್.ಕೆ)**
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (ಎ&ಇ) (ಲೆಕ್ಕಪರಿಶೋಧನೆ-1&2) ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ(ವೆಚ್ಚ), ಬೆಂಗಳೂರು.
3. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು
4. ಜಿಲ್ಲಾಧಿಕಾರಿಗಳು, ಬೆಳಗಾವಿ ಜಿಲ್ಲೆ, ಬೆಳಗಾವಿ.
5. ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು, ಬೆಳಗಾವಿ ಜಿಲ್ಲೆ, ಬೆಳಗಾವಿ.
6. ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.

**ಪ್ರತಿ ಮಾಹಿತಿಗಾಗಿ:**

1. ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು
3. ಸರ್ಕಾರದ ಉಪ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಸಹಾಯಕರು, ವಿಕಾಸಸೌಧ, ಬೆಂಗಳೂರು.
4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.